# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1002+1003 |
| ಸದಸ್ಯರ ಹೆಸರು | : | ಶ್ರೀ ಟಿ.ಎ ಶರವಣ |
| ಉತ್ತರಿಸುವ ದಿನಾಂಕ | : | 24.02.2023. |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2022-23ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ನಿಗಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; (ಪೂರಕ ಅಂದಾಜಿನ ಅನುದಾನ ವಿವರವನ್ನು ನಿಗಮವಾರು ನೀಡುವುದು)</td><td>
<u>ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ:</u><br>
ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮಕ್ಕೆ 2022-23ನೇ ಸಾಲಿಗೆ ಬಿಡುಗಡೆಯಾದ ಅನುದಾನದ ವಿವರ ಕೆಳಕಂಡಂತಿದೆ.<br>
(ರೂ.ಲಕ್ಷಗಳಲ್ಲಿ)
<table>
<tr><th>ಆಯವ್ಯಯ</th><th>ವಿ.ಡಿ.ಪಿ</th><th>ಹೆಚ್ಚುವರಿ ಅನುದಾನ</th><th>ಒಟ್ಟು</th></tr>
<tr><td>5000.00</td><td>1600.00</td><td>10000.00</td><td>16600.00</td></tr>
</table>
<u>ಡಾ: ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ</u><br>
2022-23ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಿಗಮಕ್ಕೆ ಬಿಡುಗಡೆಯಾದ ಅನುದಾನ ರೂ.5375.00 ಲಕ್ಷಗಳು.<br><br>
<u>ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ</u><br>
2022-23ನೇ ಸಾಲಿನಲ್ಲಿ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮಕ್ಕೆ ರೂ. 73.68 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. ರೂ. 50.00 ಕೋಟಿಗಳನ್ನು ಪೂರಕ ಅಂದಾಜಿನಲ್ಲಿ ಹಂಚಿಕೆ ಮಾಡಿದ್ದು, ಸದರಿ ಅನುದಾನ ಆರ್ಥಿಕ ಇಲಾಖೆಯಿಂದ ಬಿಡುಗಡೆಯಾಗಿರುವುದಿಲ್ಲ.<br>
<u>ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ:</u><br>
2022-23ನೇ ಸಾಲಿನಲ್ಲಿ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮಕ್ಕೆ ರೂ. 92.39 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. ಇದರಲ್ಲಿ ರೂ. 50.00 ಕೋಟಿಗಳನ್ನು ಪೂರಕ ಅಂದಾಜಿನಲ್ಲಿ ಹಂಚಿಕೆ ಮಾಡಿದ್ದು, ಸದರಿ ಅನುದಾನ ಆರ್ಥಿಕ ಇಲಾಖೆಯಿಂದ ಬಿಡುಗಡೆಯಾಗಿರುವುದಿಲ್ಲ.<br>
<u>ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ</u><br>
ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ 2022-23ನೇ ಸಾಲಿನಲ್ಲಿ ಸರ್ಕಾರದಿಂದ ಇದುವರೆವಿಗೆ ಬಿಡುಗಡೆಯಾದ ಅನುದಾನದ ವಿವರ ಕೆಳಕಂಡಂತಿದೆ.<br>
(ರೂ.ಕೋಟಿಗಳಲ್ಲಿ)
<table>
<tr><th>ಕ್ರಸ</th><th>ವರ್ಷ</th><th>ಷೇರು ಬಂಡವಾಳ</th><th>ಸಹಾಯಧನ</th><th>ಸಾಲ</th><th>ಒಟ್ಟು</th></tr>
<tr><td>1</td><td>2022-23</td><td>2.00</td><td>91.25</td><td>3.00</td><td>96.25</td></tr>
</table>
</td></tr>
</table>

| | | |
|---|---|---|
| ಆ) | ಈ ಸಾಲಿನಲ್ಲಿ ಈವರೆವಿಗೂ ಎಷ್ಟು ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಸಾಲ/ಸಹಾಯ ಧನವನ್ನು ಮಂಜೂರು ಮಾಡಲಾಗಿದೆ ಹಾಗೂ ಇನ್ನು ಎಷ್ಟು ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆ ಮಾಡಬೇಕಾಗಿದೆ; (ನಿಗಮವಾರು ಯೋಜನಾವಾರು ವಿವರ ನೀಡುವುದು) | <u>ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ:</u><br>2022-23ನೇ ಸಾಲಿಗೆ ಡಿ.ಬಿ.ಟಿ ಮೂಲಕ ಸಾಲ/ಸಹಾಯ ಧನವನ್ನು ಮಂಜೂರು ಮಾಡುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ.<br><br><u>ಡಾ: ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ</u><br>ಪ್ರಸ್ತುತ ಸಾಲಿನಲ್ಲಿ ಜಿಲ್ಲಾ ಆಯ್ಕೆ ಸಮಿತಿ ಕಾರ್ಯವು ಪ್ರಗತಿಯಲ್ಲಿರುತ್ತದೆ. ಜಿಲ್ಲಾ ಆಯ್ಕೆ ಸಮಿತಿ ಮುಗಿದ ನಂತರ ನಿಗಮದ ನೇರ ಸಾಲ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಸಾಲ ಮತ್ತು ಸಹಾಯಧನವನ್ನು ಡಿಬಿಟಿ ಮೂಲಕ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುವುದು.<br><br>**<u>ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ</u>**<br>2022-23ನೇ ಸಾಲಿನಲ್ಲಿ ನಿಗಮದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಡಿ ಆಯ್ಕೆಯಾದ ಫಲಾಪೇಕ್ಷಿಗಳಿಗೆ ಡಿ.ಬಿ.ಟಿ. ಮೂಲಕ ಹಣ ವರ್ಗಾವಣೆ ಮಾಡಲು ಡಿ.ಬಿ.ಟಿ. ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು, ಆಯ್ಕೆಯಾದ ಫಲಾಪೇಕ್ಷಿಗಳಿಗೆ ಸಾಲ/ ಸಹಾಯಧನವನ್ನು ಡಿ.ಬಿ.ಟಿ ಮೂಲಕ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.<br><u>ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ:</u><br>2022-23ನೇ ಸಾಲಿನಲ್ಲಿ ನಿಗಮದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಡಿ ಆಯ್ಕೆಯಾದ ಫಲಾಪೇಕ್ಷಿಗಳಿಗೆ ಡಿ.ಬಿ.ಟಿ. ಮೂಲಕ ಹಣ ವರ್ಗಾವಣೆ ಮಾಡಲು ಡಿ.ಬಿ.ಟಿ. ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ಆಯ್ಕೆಯಾದ ಫಲಾಪೇಕ್ಷಿಗಳಿಗೆ ಸಾಲ/ ಸಹಾಯಧನವನ್ನು ಡಿ.ಬಿ.ಟಿ ಮೂಲಕ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.<br>**<u>ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ</u>**<br>ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಸಾಲ/ಸಹಾಯಧನವನ್ನು ಮಂಜೂರು ಮಾಡುವ ಪ್ರಕ್ರಿಯೆ 2022-23ನೇ ಸಾಲಿನಿಂದ ಪ್ರಾರಂಭವಾಗಿದ್ದು, ಡಿ.ಬಿ.ಟಿ ತಂತ್ರಾಂಶ ಸಿದ್ಧಪಡಿಸುವ ಸಿದ್ಧತಾ ಕಾರ್ಯ ಅಂತಿಮ ಹಂತದಲ್ಲಿರುತ್ತದೆ. |
| ಇ) | ಜನವರಿ 2023ರ ಅಂತ್ಯಕ್ಕೆ ಎಲ್ಲಾ ನಿಗಮಗಳಲ್ಲಿ ಉಳಿಕೆಯಾದ ಅನುದಾನ ಎಷ್ಟು; (ನಿಗಮವಾರು ವಿವರ ನೀಡುವುದು) ಶೇಕಡಾ ಎಷ್ಟು ಡಿ.ಬಿ.ಟಿ. ಸಾಧಿಸಲಾಗಿದೆ; ಡಿ.ಬಿ.ಟಿ ಪ್ರಗತಿ ಸಾಧಿಸದೆ ಇರಲು ಕಾರಣವೇನು? | <u>ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ:</u><br>ಜನವರಿ-2023ರ ಅಂತ್ಯಕ್ಕೆ ರೂ.15063.47 ಉಳಿಕೆಯಾಗಿರುತ್ತದೆ. ಮಾನ್ಯ ಶಾಸಕರ ಆಯ್ಕೆ ಸಮಿತಿಯಲ್ಲಿ ಫಲಾಪೇಕ್ಷಿಗಳನ್ನು ಆಯ್ಕೆ ಪ್ರಕ್ರಿಯೆಯು ಪ್ರಗತಿಯಲ್ಲಿ ಇರುತ್ತದೆ ಹಾಗೂ ಡಿ.ಬಿ.ಟಿ. ತಂತ್ರಾಂಶದಲ್ಲಿ ತಾಂತ್ರಿಕ ಕಾರಣಗಳಿಂದ ಪ್ರಗತಿ ಸಾಧಿಸಲು ವಿಳಂಬವಾಗಿರುತ್ತದೆ.<br><br><u>ಡಾ: ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ</u><br>ನಿಗಮದ ಯೋಜನೆಗಳು ಜಿಲ್ಲಾ ಆಯ್ಕೆ ಸಮಿತಿ ಪೂರ್ಣಗೊಂಡ ನಂತರ ಸಾಲ ಮತ್ತು ಸಹಾಯಧನವನ್ನು ಡಿಬಿಟಿ ಮೂಲಕ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಿ ಶೇ.100 ರಷ್ಟು ಡಿಬಿಟಿ ಸಾಧಿಸಲಾಗುವುದು. |

| | | |
|---|---|---|
| | | **ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ**<br>ಜನವರಿ-2023ರ ಅಂತ್ಯಕ್ಕೆ ನಿಗಮದಲ್ಲಿ ಉಳಿಕೆಯಾದ ಅನುದಾನ ರೂ. 30.30 ಕೋಟಿಗಳಾಗಿರುತ್ತದೆ.<br><br>**ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ:**<br>ಜನವರಿ-2023ರ ಅಂತ್ಯಕ್ಕೆ ನಿಗಮದಲ್ಲಿ ಉಳಿಕೆಯಾದ ಅನುದಾನ ರೂ. 77.54 ಕೋಟಿಗಳಾಗಿರುತ್ತದೆ.<br><br>**ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ**<br>ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಲ್ಲಿ ಸರ್ಕಾರದಿಂದ ಬಿಡುಗಡೆಯಾದ ರೂ.96.25 ಕೋಟಿಗಳ ಅನುದಾನದಲ್ಲಿ ಜನವರಿ 2023ರ ಅಂತ್ಯಕ್ಕೆ ಉಳಿಕೆಯಾದ ಅನುದಾನ ರೂ.91.97 ಕೋಟಿಗಳು. ಡಿ.ಬಿ.ಟಿ ತಂತ್ರಾಂಶ ಕಾರ್ಯ ಪೂರ್ಣಗೊಂಡ ನಂತರ ಉಳಿದ ಅನುದಾನವನ್ನು ಉದ್ದೇಶಿತ ಯೋಜನೆಗಳ ಅನುಷ್ಠಾನಕ್ಕಾಗಿ ತ್ವರಿತವಾಗಿ ಖರ್ಚು ಮಾಡಲಾಗುವುದು. |

ಸಂಖ್ಯೆ: ಸಕಇ 84 ಎಸ್‌ಡಿಸಿ 2023

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.